# ಕರ್ನಾಟಕ ವೀರಶೈವ ಲಿಂಗಾಯತ ಅಭಿವೃದ್ಧಿ ನಿಗಮ ನಿಯಮಿತ

**(ಕರ್ನಾಟಕ ಸರ್ಕಾರ)**

## ಪ್ರಕಟಣೆ

### 2024–25 ನೇ ಸಾಲಿಗೆ ಅನುಷ್ಠಾನಗೊಳಿಸುತ್ತಿರುವ ನಿಗಮದ ಯೋಜನೆಗಳು

ವೀರಶೈವ–ಲಿಂಗಾಯತ ಜಾತಿ ಹಾಗೂ ಉಪಜಾತಿಗೆ ಸೇರಿದ ಸಮುದಾಯದ ಜನರ (**ಪ್ರವರ್ಗ–IIIಬಿ**) ಅಭಿವೃದ್ಧಿಗಾಗಿ 2024–25 ನೇ ಸಾಲಿನಲ್ಲಿ ಅನುಷ್ಠಾನಗೊಳಿಸುತ್ತಿರುವ ಕೆಳಕಂಡ ಯೋಜನೆಗಳಲ್ಲಿ ಸೌಲಭ್ಯ ಪಡೆಯಬಯಸುವವರಿಂದ ಆನ್‌ಲೈನ್‌ನಲ್ಲಿ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

**ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ: 31.08.2024**

**1. ಶೈಕ್ಷಣಿಕ ಸಾಲ ಯೋಜನೆಗಳು**

- **ಬಸವ ಬೆಳಗು ಯೋಜನೆ (Fresh Students)**

  ವೀರಶೈವ–ಲಿಂಗಾಯತ ಸಮುದಾಯಕ್ಕೆ ಸೇರಿದ್ದು ಅವರ ಕುಟುಂಬ ವಾರ್ಷಿಕ ಆದಾಯ ರೂ.3.50 ಲಕ್ಷ ಮಿತಿಯಲ್ಲಿರುವ ವಿದ್ಯಾರ್ಥಿಗಳು ವೃತ್ತಿಪರ ಕೋರ್ಸ್‌ಗಳಾದ ಇಂಜಿನಿಯರಿಂಗ್, ವೈದ್ಯಕೀಯ, ದಂತ ವೈದ್ಯಕೀಯ ಮುಂತಾದ 28 ಕೋರ್ಸ್‌ಗಳಲ್ಲಿ ವ್ಯಾಸಂಗ ಮಾಡುತ್ತಿದ್ದಲ್ಲಿ ವಾರ್ಷಿಕ ರೂ.1.00 ಲಕ್ಷಗಳಂತೆ ಕೋರ್ಸ್ ನ ಅವಧಿಗೆ ಗರಿಷ್ಠ ರೂ.4.00 ಲಕ್ಷಗಳಿಂದ 5.00 ಲಕ್ಷಗಳವರೆಗೆ ವಾರ್ಷಿಕ ಶೇ.2 ರ ಬಡ್ಡಿದರದಲ್ಲಿ ಸಾಲ ಮಂಜೂರು ಮಾಡಲಾಗುವುದು. ವಿದ್ಯಾರ್ಥಿಗಳು CET/NEET ಇತ್ಯಾದಿ ಪ್ರವೇಶ ಪರೀಕ್ಷೆಯಲ್ಲಿ ಉತ್ತೀರ್ಣರಾಗಿ ಸರ್ಕಾರಿ ಕೋಟಾದ ಸೀಟು ಪಡೆದಿರಬೇಕು.
- **ಬಸವ ಬೆಳಗು ಯೋಜನೆ (Renewals)**: 2022–23 ನೇ ಸಾಲಿನಲ್ಲಿ ಸಾಲ ಪಡೆದ ವಿದ್ಯಾರ್ಥಿಗಳಿಗೆ 3ನೇ ಕಂತಿನ ನವೀಕರಣ ಸಾಲ ಹಾಗೂ 2023–24 ನೇ ಸಾಲಿನಲ್ಲಿ ಸಾಲ ಪಡೆದ ವಿದ್ಯಾರ್ಥಿಗಳಿಗೆ 2ನೇ ಕಂತಿನ ನವೀಕರಣ ಸಾಲ ಮಂಜೂರು ಮಾಡಲು ವ್ಯಾಸಂಗ ದೃಢೀಕರಣ ಮತ್ತು ಹಿಂದಿನ ವರ್ಷದ ಅಂಕಪಟ್ಟಿಯೊಂದಿಗೆ ಅರ್ಜಿ ಸಲ್ಲಿಸುವುದು.
- **ವಿದೇಶ ವಿದ್ಯಾವಿಕಾಸ ಯೋಜನೆ** (Fresh Students)

  ವೀರಶೈವ–ಲಿಂಗಾಯತ ಸಮುದಾಯಕ್ಕೆ ಸೇರಿದ್ದು ಅವರ ಕುಟುಂಬ ವಾರ್ಷಿಕದ ಆದಾಯ ರೂ.8.00 ಲಕ್ಷಗಳ ಮಿತಿಯಲ್ಲಿರುವ ವಿದ್ಯಾರ್ಥಿಗಳು QS World Ranking 500 ರೊಳಗೆ ಬರುವ ವಿದೇಶಿ ವಿಶ್ವವಿದ್ಯಾಲಯಗಳಲ್ಲಿ ಪೋಸ್ಟ್ ಡಾಕ್ಟರಲ್, ಪಿಹೆಚ್ ಡಿ, ಮಾಸ್ಟರ್ ಡಿಗ್ರಿ ಕೋರ್ಸ್‌ಗಳಲ್ಲಿ ಉನ್ನತ ವ್ಯಾಸಂಗ ಪಡೆಯಲು ವಾರ್ಷಿಕ ಗರಿಷ್ಠ ರೂ.10.00 ಲಕ್ಷಗಳಂತೆ 3ವರ್ಷದ ಅವಧಿಗೆ ಒಟ್ಟು ರೂ.20.00 ಲಕ್ಷಗಳನ್ನು ಶೂನ್ಯ ಬಡ್ಡಿದರದಲ್ಲಿ ಸಾಲ ಮಂಜೂರು ಮಾಡಲಾಗುವುದು.
- **ವಿದೇಶ ವಿದ್ಯಾವಿಕಾಸ ಯೋಜನೆ (Renewals)** 2022–23 ಮತ್ತು 2023–24 ನೇ ಸಾಲಿನಲ್ಲಿ ಸಾಲ ಪಡೆದ ವಿದ್ಯಾರ್ಥಿಗಳಿಗೆ 2ನೇ ಕಂತಿನ ನವೀಕರಣ ಸಾಲ ಮಂಜೂರು ಮಾಡಲು ವ್ಯಾಸಂಗ ದೃಢೀಕರಣ ಮತ್ತು ಹಿಂದಿನ ವರ್ಷದ ಅಂಕಪಟ್ಟಿಯೊಂದಿಗೆ ಅರ್ಜಿ ಸಲ್ಲಿಸುವುದು.

**2. ಜೀವಜಲ ಯೋಜನೆ:**

ವೀರಶೈವ–ಲಿಂಗಾಯತ ಸಮುದಾಯಕ್ಕೆ ಸೇರಿದ್ದು, ಕುಟುಂಬದ ವಾರ್ಷಿಕ ವರಮಾನ ಗ್ರಾಮಾಂತರ ಪ್ರದೇಶದವರಿಗೆ ರೂ.98,000/– ಹಾಗೂ ಪಟ್ಟಣ ಪ್ರದೇಶದವರಿಗೆ ರೂ.1,20,000/–ಗಳ ಮಿತಿಯೊಳಗಿರುವ ಸಣ್ಣ ಮತ್ತು ಅತಿ ಸಣ್ಣ ರೈತರ ಜಮೀನುಗಳಿಗೆ ಕೊಳವೆ ಬಾವಿ ಕೊರೆಸುವ ಮುಖೇನ ನೀರಾವರಿ ಸೌಲಭ್ಯ ಒದಗಿಸಲಾಗುವುದು.

ದಕ್ಷಿಣ ಕನ್ನಡ, ಉಡುಪಿ, ಕೊಡಗು, ಉತ್ತರ ಕನ್ನಡ, ಶಿವಮೊಗ್ಗ, ಚಿಕ್ಕಮಗಳೂರು ಹಾಗೂ ಹಾಸನ ಜಿಲ್ಲೆಗಳಲ್ಲಿ ಕನಿಷ್ಠ 1 ಎಕರೆ ಜಮೀನು ಹೊಂದಿರಬೇಕು. ಇತರೇ ಜಿಲ್ಲೆಗಳಲ್ಲಿ ಕನಿಷ್ಠ 2 ಎಕರೆ ಹಾಗೂ ಗರಿಷ್ಠ 5 ಎಕರೆ ಒಳಗೆ ಜಮೀನು ಹೊಂದಿರಬೇಕು. ಅರ್ಜಿ ಸಲ್ಲಿಸುವ ಸಂದರ್ಭದಲ್ಲಿ Farmer's FRUIT ID ಮತ್ತು ಸಣ್ಣ ಹಿಡುವಳಿದಾರರ ಪ್ರಮಾಣ ಪತ್ರ ಹೊಂದಿರಬೇಕು.

| ಕ್ರ ಸಂ | ಜಿಲ್ಲೆಗಳು | ಒಟ್ಟು ಘಟಕ ವೆಚ್ಚ | ಸಹಾಯಧನ | | ಸಾಲ | ಬಡ್ಡಿದರ |
|---|---|---|---|---|---|---|
| | | | ಬೋರ್ ವೆಲ್ drilling ಮತ್ತು ಪಂಪ್‌ಸೆಟ್ ವೆಚ್ಚ | ವಿದ್ಯುತ್ ಸರಬರಾಜು ಬಾಬ್ತು | | |
| 1. | ಬೆಂಗಳೂರು ಉತ್ತರ, ಬೆಂಗಳೂರು ದಕ್ಷಿಣ, ಬೆಂಗಳೂರು ಗ್ರಾಮಾಂತರ, ರಾಮನಗರ, ಕೋಲಾರ, ಚಿಕ್ಕಬಳ್ಳಾಪುರ ಮತ್ತು ತುಮಕೂರು (07 ಜಿಲ್ಲೆಗಳು) | 4,75,000/– | 3,50,000/– | 75,000/– | 50,000/– | 4% |
| 2. | ಉಳಿದ 25 ಜಿಲ್ಲೆಗಳು | 3,75,000/– | 2,50,000/– | 75,000/– | 50,000/– | 4% |

Visit to "KarnatakaHelp.in"

## 3. ಕಾಯಕಕಿರಣ ಯೋಜನೆ:

ವೀರಶೈವ–ಲಿಂಗಾಯತ ಸಮುದಾಯದ ನಿರುದ್ಯೋಗಿಗಳು ಸ್ವಯಂ ಉದ್ಯೋಗ ಕೈಗೊಳ್ಳಲು ಆರ್ಥಿಕ ಚಟುವಟಿಕೆಗಳಿಗನುಸಾರ ಈ ಕೆಳಕಂಡಂತೆ ಸಾಲ ಮತ್ತು ಸಹಾಯಧನ ಸೌಲಭ್ಯ ಒದಗಿಸಲಾಗುವುದು.

| ಘಟಕ ವೆಚ್ಚ | ಸಹಾಯಧನದ ಮೊತ್ತ | ಸಾಲದ ಮೊತ್ತ | ಬಡ್ಡಿದರ |
|---|---|---|---|
| ₹ 1,00,000/– | ₹ 20,000/– | ₹ 80,000/– | ಶೇ.4 |
| ₹ 1,00,000/–2,00,000/– | ₹ 30,000/– | ₹ 1,70,000/– | |

## 4. ಭೋಜನಾಲಯ ಕೇಂದ್ರ:

ಸಮುದಾಯದ ಜನರು ಹೋಟೆಲ್ (ಖಾನಾವಳಿ) ಉದ್ಯಮ ಕೈಗೊಳ್ಳಲು ಈ ಯೋಜನೆಯಲ್ಲಿ ಸಾಲ ಮತ್ತು ಸಹಾಯಧನ ನೀಡಲಾಗುವುದು. ಹೋಟೆಲ್ ಉದ್ದಿಮೆ ಕೈಗೊಳ್ಳಲು ಘಟಕ ವೆಚ್ಚ ರೂ. 5.00 ಲಕ್ಷ ಇದರಲ್ಲಿ ರೂ.4,60,000/– ಬ್ಯಾಂಕ್ ಸಾಲ ಪಡೆದಿದ್ದಲ್ಲಿ ರೂ. 40,000/– ಸಹಾಯಧನ ನೆರವು ನೀಡಲಾಗುವುದು. ಫಲಾನುಭವಿಗಳು ತಮ್ಮ ಸ್ವಂತ ಹೆಸರಿನಲ್ಲಿ ಕನಿಷ್ಠ 20*30 ಅಳತೆಯುಳ್ಳ ನಿವೇಶನ ಹೊಂದಿರಬೇಕು.

## 5. ವಿಭೂತಿ ನಿರ್ಮಾಣ ಘಟಕ

ವೀರಶೈವ–ಲಿಂಗಾಯತ ಸಮುದಾಯದವರು ವಿಭೂತಿಯನ್ನು ತಯಾರಿಸುವವರಿಗೆ ಸಾಲ ಮತ್ತು ಸಹಾಯಧನ ನೀಡುವ ಯೋಜನೆ ಇದಾಗಿದೆ. ಕುಟುಂಬದ ವಾರ್ಷಿಕ ವರಮಾನ ರೂ.3.50 ಲಕ್ಷಗಳು ಮತ್ತು 18 ರಿಂದ 55 ವರ್ಷಗಳ ವಯೋಮಿತಿಯಲ್ಲಿರುವವರು ಅರ್ಜಿ ಸಲ್ಲಿಸಬಹುದು. ವಿಭೂತಿ ನಿರ್ಮಾಣ ಘಟಕ ನಿರ್ಮಿಸಲು ಘಟಕ ವೆಚ್ಚ ರೂ. 4.00 ಲಕ್ಷ ಇದರಲ್ಲಿ ರೂ.3,60,000/– ನಿಗಮದಿಂದ ಸಾಲ ಮತ್ತು ರೂ. 40,000/– ಸಹಾಯಧನ ವಾರ್ಷಿಕ ಶೇ.3 ರ ಬಡ್ಡಿದರದಲ್ಲಿ ನೆರವು ನೀಡಲಾಗುವುದು.

## 6. ಸ್ವಾವಲಂಭಿ ಸಾರಥಿ ಯೋಜನೆ:

ನಿರುದ್ಯೋಗಿ ಚಾಲಕರಿಗೆ ಸ್ವಯಂ ಉದ್ಯೋಗ ಕೈಗೊಳ್ಳಲು ಸ್ವಾವಲಂಭಿ ಸಾರಥಿ ಯೋಜನೆಯಡಿ ನಾಲ್ಕು ಚಕ್ರ ವಾಹನ (ಹಳದಿ ಬೋರ್ಡ್) ಖರೀದಿಗೆ ಪಡೆಯುವ ಸಾಲಕ್ಕೆ ಶೇ.50ರಷ್ಟು ಅಥವಾ ಗರಿಷ್ಠ 3.00 ಲಕ್ಷಗಳ ಸಹಾಯಧನವನ್ನು ನಿಗಮದಿಂದ ಮಂಜೂರು ಮಾಡಲಾಗುವುದು. ಉಳಿದ ಮೊತ್ತವನ್ನು ಬ್ಯಾಂಕ್/ ಹಣಕಾಸು ಸಂಸ್ಥೆಗಳ ಮೂಲಕ ಅವರು ವಿಧಿಸುವ ಚಾಲ್ತಿ ಬಡ್ಡಿದರದಲ್ಲಿ ಸಾಲ ಪಡೆಯುವುದು. ವಯೋಮಿತಿ 21 ರಿಂದ 45 ವರ್ಷಗಳ ವಯೋಮಿತಿಯಲ್ಲಿರುವವರು ಅರ್ಜಿ ಸಲ್ಲಿಸಬಹುದು.

7. **ಸ್ವಯಂ ಉದ್ಯೋಗ ಸಾಲ ಯೋಜನೆ: (ವಾಣಿಜ್ಯ ಬ್ಯಾಂಕ್‌ಗಳ ಸಹಯೋಗದೊಂದಿಗೆ)**

ನಿರುದ್ಯೋಗಿಗಳಿಗೆ ಸ್ವಯಂ ಉದ್ಯೋಗ ಕಲ್ಪಿಸಿಕೊಳ್ಳಲು ಅವರು ಕೈಗೊಳ್ಳುವ ಕೃಷಿ/ ಕೃಷಿ ಅವಲಂಭಿತ ಚಟುವಟಿಕೆಗಳು, ವ್ಯಾಪಾರ, ಸಾರಿಗೆ ಮತ್ತು ಯಂತ್ರೋಪಕರಣಗಳನ್ನು ಕೊಳ್ಳುವ ಆರ್ಥಿಕ ಚಟುವಟಿಕೆಗಳು/ ಉದ್ಯಮಗಳಿಗೆ ವಾಣಿಜ್ಯ ಬ್ಯಾಂಕ್‌ಗಳ ಮೂಲಕ ಸಾಲ ಪಡೆದಿದ್ದಲ್ಲಿ ನಿಗಮದಿಂದ ಶೇ.20 ರಷ್ಟು ಅಥವಾ ಗರಿಷ್ಠ ರೂ. 1.00 ಲಕ್ಷಗಳ ಸಹಾಯಧನ ಮಂಜೂರು ಮಾಡಲಾಗುವುದು.

8. **ಸ್ವಾತಂತ್ರ್ಯ ಅಮೃತ ಮಹೋತ್ಸವದ ಮುನ್ನಡೆ ಯೋಜನೆ**

ವಿದ್ಯಾವಂತ ಯುವಜನರನ್ನು ಗುರುತಿಸಿ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ತರಬೇತಿಯನ್ನು ಸರ್ಕಾರಿ ಸ್ವಾಮ್ಯದ ಸಂಸ್ಥೆಗಳಾದ ITIs, GTTC, KGTTI, ATDC, VTU ಮೂಲಕ ವಿವಿಧ ಅಲ್ಪಾವಧಿ ಮತ್ತು ಉತ್ಕೃಷ್ಟ ಕೌಶಲ್ಯ ತರಬೇತಿಯನ್ನು ನೀಡಿ ಅವರ ಉದ್ಯೋಗ ಸಾಮರ್ಥ್ಯವನ್ನು ಹಾಗೂ ಸಾಮಾಜಿಕ/ ಆರ್ಥಿಕ ಸ್ಥಿತಿಗತಿಗಳನ್ನು ಉನ್ನತೀಕರಿಸುವ ನಿಟ್ಟಿನಲ್ಲಿ ಉದ್ಯೋಗಮುಖಿಗಳನ್ನಾಗಿಸುವುದು.

**ಅರ್ಹತೆಗಳು:** 10ನೇತರಗತಿ/ದ್ವಿತೀಯ ಪಿ.ಯು.ಸಿ/ಡಿಪ್ಲೋಮ/ಪದವಿ/ಇಂಜಿನಿಯರಿಂಗ್ ವ್ಯಾಸಂಗವನ್ನು ಪೂರ್ಣಗೊಳಿಸಿರಬೇಕು, ಅರ್ಜಿದಾರರ ವಯಸ್ಸು 18 ರಿಂದ 25 ವರ್ಷಗಳ ಒಳಗಿರಬೇಕು. ಅರ್ಜಿದಾರರ ಕುಟುಂಬದ ವಾರ್ಷಿಕ ವರಮಾನ/ಆದಾಯ ರೂ.8.00 ಲಕ್ಷಗಳಿಗಿಂತ ಕಡಿಮೆ ಇರಬೇಕು. ಅರ್ಜಿದಾರರು https://bcwd.kaushalkar.com/ಜಾಲತಾಣದೊಂದಿಗೆ ಅರ್ಜಿಯನ್ನು ಸಲ್ಲಿಸಬಹುದು.

**ವಿಶೇಷ ಸೂಚನೆ:** Visit to "KarnatakaHelp.in"

- **ಅರ್ಜಿದಾರರು ತಮ್ಮ ಆಧಾರ್‌ಸಂಖ್ಯೆಗೆ ಮೊಬೈಲ್ ಸಂಖ್ಯೆಯನ್ನು ಜೋಡಣೆ ಮಾಡಿರಬೇಕು ಹಾಗೂ ಬ್ಯಾಂಕ್ ಖಾತೆಗೆ ಆಧಾರ್ ಸಂಖ್ಯೆಯನ್ನು ಸೀಡ್ ಮಾಡಿರಬೇಕು.**
- **ನಿಗಮವು ಅನುಷ್ಠಾನಗೊಳಿಸುವ ಈ ಮೇಲ್ಕಂಡ ಯೋಜನೆಗಳಲ್ಲಿ ಸರ್ಕಾರದ ವಿವೇಚನಾ ಕೋಟಾ ಮತ್ತು ನಿಗಮದ ಅಧ್ಯಕ್ಷರು/ ನಿರ್ದೇಶಕರ ಮಂಡಳಿಯ ವಿವೇಚನಾ ಕೋಟಾದಡಿ ಸೌಲಭ್ಯ ಪಡೆಯಬಯಸುವವರೂ ಸಹ ಆನ್‌ಲೈನ್‌ನಲ್ಲಿ ಅರ್ಜಿಯನ್ನು ಸಲ್ಲಿಸುವುದು. ಒಂದು ಕುಟುಂಬದ ಒಬ್ಬ ಸದಸ್ಯರು ಮಾತ್ರ ಮೇಲ್ಕಂಡ ಯಾವುದಾದರೂ ಒಂದು ಯೋಜನೆಯಲ್ಲಿ ಸೌಲಭ್ಯ ಪಡೆಯಲು ಅರ್ಹರಿರುತ್ತಾರೆ.**
- **ಅರ್ಹ ಫಲಾಪೇಕ್ಷಿಗಳು ಗ್ರಾಮ ಒನ್/ ಬೆಂಗಳೂರು ಒನ್/ ಕರ್ನಾಟಕ ಒನ್ ನಾಗರೀಕ ಸೇವಾ ಕೇಂದ್ರಗಳಲ್ಲಿ ದಾಖಲೆಗಳೊಂದಿಗೆ ಸೇವಾಸಿಂಧು ಪೋರ್ಟಲ್‌ನಲ್ಲಿ ಅರ್ಜಿಗಳನ್ನು ಸಲ್ಲಿಸಬೇಕಾಗಿರುತ್ತದೆ.**
- **ಒಂದು ಬಾರಿ ನಿಗಮದ ಯಾವುದಾದರೂ ಯೋಜನೆಯಲ್ಲಿ ಪ್ರಯೋಜನ ಪಡೆದಿದ್ದಲ್ಲಿ ಅಂತಹವರು ಹಾಗೂ ಅವರ ಕುಟುಂಬದವರು ಮತ್ತೊಮ್ಮೆ ಸೌಲಭ್ಯ ಕೋರಿ ಅರ್ಜಿ ಸಲ್ಲಿಸಲು ಅರ್ಹರಿರುವುದಿಲ್ಲ.**
- **2023–24 ನೇ ಸಾಲಿಗೆ ಅರ್ಜಿ ಸಲ್ಲಿಸಿ ಆಯ್ಕೆಯಾಗದವರು ಆದೇ ಯೋಜನೆಗೆ ಈ ವರ್ಷ ಮರುಅರ್ಜಿ ಸಲ್ಲಿಸುವ ಅಗತ್ಯತೆ ಇರುವುದಿಲ್ಲ.**
- **ಹೆಚ್ಚಿನ ಮಾಹಿತಿಗಾಗಿ ನಿಗಮದ ಜಾಲತಾಣ *https://kvldcl.karnataka.gov.in* ಅಥವಾ ನಿಗಮದ ದೂರವಾಣಿ ಸಂಖ್ಯೆ 080 22865522/ 9900012351 ಅನ್ನು ಸಂಪರ್ಕಿಸುವುದು ಅಥವಾ ಜಿಲ್ಲಾ ವ್ಯವಸ್ಥಾಪಕರು, ಡಿ. ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದ ಜಿಲ್ಲಾ ಕಛೇರಿಗಳನ್ನು ಸಂಪರ್ಕಿಸಬಹುದಾಗಿದೆ.**

ಸಹಿ/–

ಅಮರೇಗೌಡ ಹೆಚ್ ಮಾಲಿಪಾಟೀಲ ಕೆ.ಟಿ.ಎಸ್

ವ್ಯವಸ್ಥಾಪಕ ನಿರ್ದೇಶಕರು